20

10.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ವಿಸ್ತರಣಾ ಪದ್ಧತಿಯನ್ನು ಅಳವಡಿಸುವ ಯೋಜನೆಯ ಬಗ್ಗೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ/95/ಕೃಯೋಕಾ/2013, ಬೆಂಗಳೂರು, ದಿನಾಂಕ: 07.10.2013.**

ಓದಲಾಗಿದೆ:

1. 2013-14ನೇ ಸಾಲಿನ ಪರಿಷ್ಕೃತ ಆಯವ್ಯಯ ಭಾಷಣ ಕಂಡಿಕೆ-71.
2. ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಪಿಎಲ್ಎನ್/ತಾಂ-1/ಆಯವ್ಯಯ ಕಂಡಿಕೆ/2013-14, ದಿನಾಂಕ: 06.08.2013 ಮತ್ತು 07.08.2013.

ಮೇಲೆ ಓದಲಾದ (1)ರಲ್ಲಿ ದಿನಾಂಕ: 12.07.2013 ರಂದು ಮಾನ್ಯ ಮುಖ್ಯಮಂತ್ರಿಯವರು ಮಂಡಿಸಿರುವ 2013-14ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 71 ರಲ್ಲಿ ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ವಿಸ್ತರಣಾ ಪದ್ಧತಿಯನ್ನು ಅಳವಡಿಸುವ ಯೋಜನೆಯನ್ನು ಪ್ರಸ್ತಾಪಿಸಲಾಗಿದೆ.

ಮೇಲೆ ಓದಲಾದ (2)ರಲ್ಲಿ ಕೃಷಿ ಆಯುಕ್ತರು 2013-14ನೇ ಸಾಲಿನಿಂದ **ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ವಿಸ್ತರಣಾ ಪದ್ಧತಿಯನ್ನು ಅಳವಡಿಸುವ** ಯೋಜನೆಯ ಪ್ರಸ್ತಾವನೆಗೆ ಮಂಜೂರಾತಿ ಆದೇಶವನ್ನು ಹೊರಡಿಸುವಂತೆ ಕೋರಿ ಕೆಳಕಂಡಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ:

ಏಕಗವಾಕ್ಷಿ ಮಾದರಿಯಲ್ಲಿ ಒಂದೇ ಸೂರಿನಡಿ ರೈತರ ಸಮಸ್ಯೆಗಳಿಗೆ ಪರಿಹಾರ ಸೂಚಿಸುವುದು ಹಾಗೂ ರೈತರಿಗೆ ಹೊಸ ತಾಂತ್ರಿಕತೆಗಳು, ಅಗತ್ಯವಾದ ತರಬೇತಿ ಮತ್ತು ತಿಳುವಳಿಕೆಯನ್ನು ಪರಿಣಿತ ಸಂಸ್ಥೆಗಳ ಸಹಭಾಗಿತ್ವದ ಮೂಲಕ ನಿಖರವಾಗಿ ವೃತ್ತಿಪರ ಮಾದರಿಯಲ್ಲಿ ರೈತನಿಗೆ ಬೇಕಾಗುವ ಕೃಷಿ, ತೋಟಗಾರಿಕೆ, ಹೈನುಗಾರಿಕೆ, ಪಶುಸಂಗೋಪನೆ, ಮೀನುಗಾರಿಕೆ, ರೇಷ್ಮೆ, ಮೌಲ್ಯವರ್ಧನೆ, ಸಮಗ್ರ ಬೇಸಾಯ ಕ್ರಮಗಳು, ಮಾರುಕಟ್ಟೆ ಮುಂತಾದ ಎಲ್ಲಾ ವಿಭಾಗಗಳ ಮಾಹಿತಿಯನ್ನು ಒದಗಿಸುವುದು ಈ ಯೋಜನೆಯ ಉದ್ದೇಶವಾಗಿರುತ್ತದೆ.

ಈ ಯೋಜನೆಯನ್ನು ಜಾರಿಗೆ ತರುವುದರಿಂದ ಆಗುವ ಅನುಕೂಲಗಳೇನೆಂದರೆ:- ಒಂದೇ ಸೂರಿನಡಿ ರೈತರಿಗೆ ಕೃಷಿ ಹಾಗೂ ಕೃಷಿ ಸಂಬಂಧಿತ ಚಟುವಟಿಕೆಗಳಿಗೆ ಪರಿಣಿತ ಸಂಸ್ಥೆಯ ಸಹಭಾಗಿತ್ವದಲ್ಲಿ ಸೂಕ್ತ ಸಲಹೆಗಳನ್ನು ನೀಡುವುದು, ಸುಸ್ಥಿರ ಕೃಷಿಗೆ ಅನುವಾಗುವಂತೆ ಸಮಗ್ರ ಕೃಷಿ ಬೇಸಾಯ ಪದ್ಧತಿಯನ್ನು ಅಳವಡಿಸಲು ಕ್ರಮವಹಿಸುವುದು, ರೈತರ ಸಮಸ್ಯೆಗಳಿಗೆ ಸ್ಥಳೀಯವಾಗಿ ವೈಜ್ಞಾನಿಕವಾಗಿ ಪರಿಹಾರ ಒದಗಿಸುವುದು, ರೈತರು ಕೈಗೊಳ್ಳುವ ಕೃಷಿ ಹಾಗೂ ಕೃಷಿ ಸಂಬಂಧಿತ ಚಟುವಟಿಕೆಗಳಿಗೆ ವಿವಿಧ ಸಂಸ್ಥೆಗಳಿಂದ ಆರ್ಥಿಕ ಸಹಾಯ ಪಡೆಯಲು ಸಹಕರಿಸುವುದು, ಜಿಲ್ಲಾ, ತಾಲ್ಲೂಕು ಮತ್ತು ಹೋಬಳಿ ಕೇಂದ್ರದಲ್ಲಿ ರೈತರಿಗೆ ಮಾಹಿತಿ ನೀಡಲು ಸಂಪರ್ಕ ಕಛೇರಿಯನ್ನು ತೆರೆಯುವುದು, ರೈತರು ಬೆಳೆದ ಉತ್ಪನ್ನಗಳಿಗೆ ಮಾರುಕಟ್ಟೆ ಹಾಗೂ ಮೌಲ್ಯವರ್ಧನೆ ಬಗ್ಗೆ ಮಾಹಿತಿ ನೀಡುವುದು, ನೈಸರ್ಗಿಕ ಸಂಪನ್ಮೂಲಗಳ ಸಂರಕ್ಷಣೆ ಬಗ್ಗೆ ಮಾಹಿತಿ ನೀಡುವುದು, ಜಿಲ್ಲಾ ಕೇಂದ್ರದಲ್ಲಿ ರೈತರಿಗೆ ಉತ್ತಮ ತಾಂತ್ರಿಕ ಸಲಹೆಗಳನ್ನು ನೀಡಿ ಉತ್ಪಾದಕತೆ ಹಾಗೂ ವರಮಾನ ಹೆಚ್ಚಿಸುವುದು.

ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ವಿಸ್ತರಣಾ ಪದ್ಧತಿಯನ್ನು ಅಳವಡಿಸುವುದು ಯೋಜನೆಯನ್ನು ಪ್ರಾಯೋಗಿಕವಾಗಿ ರಾಜ್ಯದ ತುಮಕೂರು, ಚಿಕ್ಕಮಗಳೂರು, ಬಿಜಾಪುರ ಹಾಗೂ ರಾಯಚೂರು ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ಒಟ್ಟು ರೂ. 8.00 ಕೋಟಿಗಳು ಅವಶ್ಯಕತೆಯಿರುತ್ತದೆ.

ಕೃಷಿ ಆಯುಕ್ತರು ಸಲ್ಲಿಸಿರುವ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

## ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ, 2013–14ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಣೆಯಾಗಿರುವ ವಿಸ್ತರಣಾ ಕಾರ್ಯಕ್ರಮಗಳನ್ನು ವೃತ್ತಿಪರವಾಗಿ ಮತ್ತು ಸಮರ್ಪಕವಾಗಿ ನಿರ್ವಹಿಸಲು ಮತ್ತು ರೈತರಿಗೆ ಹೊಸ ತಾಂತ್ರಿಕತೆಗಳ ಮಾಹಿತಿಯನ್ನು ಸಕಾಲದಲ್ಲಿ ಒದಗಿಸಲು ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಏಕ ಗವಾಕ್ಷಿ ಮಾದರಿಯ ಯೋಜನೆಯನ್ನು ಕೃಷಿ ಮತ್ತು ಕೃಷಿ ಸಂಬಂಧಿತ ಚಟುವಟಿಕೆಯಲ್ಲಿ (ಕೃಷಿ, ತೋಟಗಾರಿಕೆ, ರೇಷ್ಮೇ, ಪಶುಸಂಗೋಪನೆ, ಮೀನುಗಾರಿಕೆ ಇತ್ಯಾದಿ) ಪ್ರಾಯೋಗಿಕವಾಗಿ ರಾಜ್ಯದ ತುಮಕೂರು, ಚಿಕ್ಕಮಗಳೂರು, ಬಿಜಾಪುರ ಹಾಗೂ ರಾಯಚೂರು ಜಿಲ್ಲೆಗಳಲ್ಲಿ ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ವಿಸ್ತರಣಾ ಪದ್ಧತಿಯನ್ನು ಅಳವಡಿಸುವ ಯೋಜನೆಯನ್ನು ಈ ಕೆಳಕಂಡ ಮಾರ್ಗಸೂಚಿಗಳನ್ನು ಅಳವಡಿಸಿಕೊಂಡು ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ.

1. ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ವಿಸ್ತರಣಾ ಪದ್ಧತಿಯನ್ನು ಅಳವಡಿಸುವ ಬಗ್ಗೆ ರೂಪುರೇಷೆಗಳನ್ನು ಸಿದ್ಧಪಡಿಸಲು ಇ–ಪ್ರಕ್ಯೂರ್‌ಮೆಂಟ್ ಮೂಲಕ ಪರಿಣಿತ ಸಂಸ್ಥೆಗಳಿಂದ EOI ಆಹ್ವಾನಿಸಿ ಯೋಜನೆಯನ್ನು ಸಿದ್ಧಪಡಿಸಿ ಅನುಷ್ಠಾನಗೊಳಿಸಲು,
2. ಒಂದೇ ಸೂರಿನಡಿ ರೈತರ ಕೃಷಿ ಹಾಗೂ ಸಂಬಂಧಿತ ಸಮಸ್ಯೆಗಳಿಗೆ ಪರಿಹಾರ ಒದಗಿಸಲು ಜಿಲ್ಲಾ ಮಟ್ಟದ ಸಂಪರ್ಕ ಕಛೇರಿಯಲ್ಲಿ ಪರಿಣಿತ ವಿಷಯ ತಜ್ಞರ ಸಹಭಾಗಿತ್ವದಲ್ಲಿ ಪರಿಹಾರ ಒದಗಿಸಲು,
3. ಜಿಲ್ಲಾ ಮಟ್ಟದಲ್ಲಿರುವ ಪರಿಣಿತ ವಿಷಯ ತಜ್ಞರ ತಂಡ ರೈತರ ತಾಕುಗಳಿಗೆ ಭೇಟಿ ನೀಡಿ ಹೊಸ ತಾಂತ್ರಿಕತೆಗಳ ಬಗ್ಗೆ ಮಾಹಿತಿ ನೀಡಲು,
4. ತಾಲ್ಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಸಂಪರ್ಕ ಕಛೇರಿಯನ್ನು ತೆರೆದು ಸ್ಥಳೀಯವಾಗಿ ಬೆಲೆ, ಮೌಲ್ಯವರ್ಧನೆ ಹಾಗೂ ಮಾರುಕಟ್ಟೆ ಸಂಪರ್ಕ ಒದಗಿಸಲು,
5. ಸಂಪರ್ಕ ಕಛೇರಿಯಲ್ಲಿ ಸರ್ಕಾರದಿಂದ ರೈತರಿಗೆ ವಿವಿಧ ಯೋಜನೆಗಳಡಿ ದೊರೆಯುವ ಸಹಾಯಧನ/ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಲು,
6. ರೈತರಿಗೆ ಬ್ಯಾಂಕ್‌ಗಳಿಂದ ದೊರೆಯುವ ಆರ್ಥಿಕ ಸಾಲ ಸೌಲಭ್ಯದ ಬಗ್ಗೆ ಮಾಹಿತಿ ನೀಡಲು,
7. ಅಗತ್ಯವಿರುವ ಕಡೆ, ರೈತ ಸಂಪರ್ಕ ಕೇಂದ್ರಗಳಲ್ಲಿ ಸಂಸ್ಥೆಗಳಿಗೆ ಸ್ಥಳಾವಕಾಶ ನೀಡಲು,

ಕೃಷಿ ಸಂಬಂಧಿತ ಇಲಾಖೆಗಳೊಂದಿಗೆ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸುವಲ್ಲಿ ಏನಾದರೂ ಮಾರ್ಗದರ್ಶನ ಅವಶ್ಯಕತೆ ಇದ್ದಲ್ಲಿ ಮಾನ್ಯ ಕೃಷಿ ರಾಜ್ಯ ಸಚಿವರ ಅಧ್ಯಕ್ಷತೆಯೊಂದಿಗೆ ಸಮಾಲೋಚಿಸಿ ಮುಂದಿನ ಕ್ರಮವಹಿಸುವುದು.

ಈ ಯೋಜನೆಗೆ ಅಗತ್ಯವಾಗಿರುವ ಒಟ್ಟು ರೂ.8.00 ಕೋಟಿಗಳನ್ನು 2013–14ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕಶೀರ್ಷಿಕೆ: 2401–00–109–0–21 (059) (ಯೋಜನೆ) ರಲ್ಲಿ ಪೂರಕ ಅಂದಾಜು–I ರಲ್ಲಿ ಒದಗಿಸಲಾಗುವುದು.

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 43 ಪಿಎಫ್ಒ 2013 ದಿನಾಂಕ: 23.08.2013 ಮತ್ತು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ/473/ವೆಚ್ಚ–4/2013, ದಿನಾಂಕ: 30–08–2013 ರ ಸಹಮತಿ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜೆ.ಆರ್. ವಿಶ್ವನಾಥಾಚಾರ್)
07/10/13 ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ).

ಇವರಿಗೆ:–

1) ಪ್ರಧಾನ ಮಹಾಲೇಖಪಾಲರು (ಆ&ಇ), ಬೆಂಗಳೂರು.
2) ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3) ಮಾನ್ಯ ಕೃಷಿ ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
4) ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5) ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕೃಷಿ ಇಲಾಖೆ,
7) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿ.ಆ.ಸು. ಇಲಾಖೆ (ಆಡಳಿತ ಸುಧಾರಣೆ)
8) ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
9) ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
10) ನಿರ್ದೇಶಕರು, ಪರಿಯೋಜನಾ ರಚನಾ ವಿಭಾಗ, ಯೋಜನಾ ಇಲಾಖೆ, ಬೆಂಗಳೂರು.
11) ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು–02.
12) ಸರ್ಕಾರದ ಉಪ ಕಾರ್ಯದರ್ಶಿ–1, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
13) ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
14) ಸರ್ಕಾರದ ಉಪ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಇವರ ಆಪ್ತ ಶಾಖೆ.
15) ಸರ್ಕಾರಧ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ–4), ಬೆಂಗಳೂರು.
16) ಸರ್ಕಾರದ ಅಧೀನ ಕಾರ್ಯದರ್ಶಿ, ಕೃಷಿ ಇಲಾಖೆ (ಕೃಷಿ ಸೇವೆ).
17) ಸಚಿವ ಸಂಪುಟ ಶಾಖೆ (ಪ್ರಕರಣ ಸಂಖ್ಯೆ: ಸಿ:564/2013)
18) ಶಾಖಾಧಿಕಾರಿ, ಕೃಷಿ ಯೋಜನಾ ಘಟಕ, ಎ ಮತ್ತು ಬಿ, ಕೃಷಿ ಇಲಾಖೆ.
19) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

[illegible]/2013-14 ದಿ:15/10/2013

ಈ ಸರ್ಕಾರಿ ಆದೇಶದ ಪ್ರತಿಯನ್ನು ಈ ಕೆಳಕಂಡವರಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ

ಉಪ ಕೃಷಿ ನಿರ್ದೇಶಕರು

ಇವರಿಗೆ